ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಅಲ್ಪಸಂಖ್ಯಾತರ ಇಲಾಖೆಯಲ್ಲಿರುವ ವಸತಿ ಶಾಲೆಗಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

398 (31) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ರಾಜ್ಯದಲ್ಲಿ ಎಷ್ಟು ಮುಸ್ಲಿಂ ವಸತಿಶಾಲೆಗಳಿವೆ ; (ಜಿಲ್ಲಾವಾರು ಮಾಹಿತಿ ನೀಡಿ, ಸರಕಾರಿ ಮುಸ್ಲಿಂ ವಸತಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು) ;

(ಆ) ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಈ ವಸತಿ ಶಾಲೆಗಳಲ್ಲಿ ಯಾವ ಯಾವ ಧರ್ಮದ ಅಲ್ಪಸಂಖ್ಯಾತರು ವಿದ್ಯಾಭ್ಯಾಸ ಮಾಡುತ್ತಿದ್ದಾರೆ ;(ಜಾತಿವಾರು ಜಿಲ್ಲಾವಾರು ವಿವರ ನೀಡುವುದು)

(ಇ) 19-05-2018 ರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ನಿರ್ದೇಶಕರ ಆದೇಶದಲ್ಲಿ ಇಲಾಖೆಯ ಆಡಳಿತಕ್ಕೆ ಒಳಪಡುವ ಎಲ್ಲಾ ವಸತಿ ಶಾಲೆಗಳಲ್ಲಿ ಅರೆಬಿಕ್ ಶಿಕ್ಷಣ ಭೋಧಿಸಲು ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಈ) ಇಲಾಖೆಯ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಮುಸ್ಲಿಂ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಇತರ ಧರ್ಮದ ವಿದ್ಯಾರ್ಥಿಗಳೂ ವಿದ್ಯಾಭ್ಯಾಸ ಮಾಡುತ್ತಿರುವುದರಿಂದ ಈ ವಿದ್ಯಾರ್ಥಿಗಳಿಗೂ ಅರೆಬಿಕ್ ಶಿಕ್ಷಣ ಮತ್ತು ಶುಕ್ರವಾರದ ಪ್ರಾರ್ಥನೆಯನ್ನು ಕಡ್ಡಾಯಗೊಳಿಸಿ ಹೊರಡಿಸಿರುವ ಆದೇಶವು ಕಾನೂನು ಸುವ್ಯವಸ್ಥೆಗೆ ಧಕ್ಕೆಯುಂಟು ಮಾಡುವ ಬಗ್ಗೆ ಸರ್ಕಾರದ ನಿಲುವೇನು ?